ಸೇರಿದ ವಸತಿ ಗೃಹವು ಯಾವ ಸೌಕರ್ಯಗಳೂ ಇಲ್ಲದೆ ಹೀನಾಯ ಸ್ಥಿತಿಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಪ್ರವಾಸಿಗರ ಹಿತದೃಷ್ಟಿಯಿಂದ ಸೌಕರ್ಯ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಜಿ. ಪಡ್. ಈಶ್ವರಪ್ಪ ರೆಡ್ಡಿ (ಲೋಕೋಪಯೋಗಿ ಮಂತ್ರಿಗಳು):-

ಅ) ಕರ್ನಾಟಕ ರಾಜ್ಯಕ್ಕೆ ಸೇರಿದಂತೆ ಒಂದು ವಸತಿಗೃಹವಿದ್ದು ಅದು ತಕ್ಕಮಟ್ಟಿಗೆ ಸುಸ್ಥಿತಿಯಲ್ಲಿದೆ.

ಆ) ಸದರೀ ವಸತಿಗೃಹದ ಅಭಿವೃದ್ಧಿಗಾಗಿ ೩.೬೫ ಲಕ್ಷ ರೂ. ಗಳ ಅಂದಾಜನ್ನು ತಯಾರಿಸಲಾಗಿದ್ದು, ಅದನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಗುತ್ತಿದೆ.

ರಾಣೆಬೆನ್ನೂರು ತಾಲ್ಲೂಕಿನಲ್ಲಿ ಕುಮುದ್ವತಿ ನದಿಗೆ ಅಡ್ಡಗೋಡೆಗಳ ನಿರ್ಮಾಣ

೧೩೬೭ (೧೮೬೮) ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಣೆಬೆನ್ನೂರು ತಾಲ್ಲೂಕಿನಲ್ಲಿ ಕುಮುದ್ವತಿ ನದಿಗೆ ಅಡ್ಡಲಾಗಿ ಲಿಂಗದಹಳ್ಳಿ ಹತ್ತಿರ ನಿಟ್ಟುರು, ಚಿಕ್ಕಮಾಗನೂರು, ಹಿರೇಮಾಗನೂರ ಈ ಗ್ರಾಮದ ಹತ್ತಿರ ನದಿಗೆ ಅಡ್ಡ ಗೋಡೆಗಳನ್ನು (ಬ್ಯಾರೇಜು) ಕಟ್ಟಲು ಮನವಿಗಳು ಬಂದಿವೆಯೇ?

ಆ) ಹಾಗಿದ್ದಲ್ಲಿ ಈ ಅಡ್ಡಗೋಡೆಗಳನ್ನು ೧೯೯೨-೯೩ರಲ್ಲಿ ನಿರ್ಮಿಸಿ ಮುಗಿಸಲಾಗುವುದೇ?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು):-

ಅ) ಹೌದು.

ಆ) ಈ ಅಡ್ಡಗೋಡೆಗಳು ಹೊಸ ಕಾಮಗಾರಿಯಾಗಿರುವುದರಿಂದ ಈ ಕಾಮಗಾರಿಗಳನ್ನು ೧೯೯೨-೯೩ರ ಬಟ್ಟು ಮೊತ್ತದ ಅನುದಾನದಲ್ಲಿ, ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಶಕ್ಯವೆಂದು ಕಂಡು ಬಂದಲ್ಲಿ, ಕಾಮಗಾರಿಗಳನ್ನು ಶುರು ಮಾಡಿ ಮುಗಿಸಲು ಪ್ರಯತ್ನಿಸಲಾಗುವುದು.

ಏತ ನೀರಾವರಿ ಯೋಜನೆ

೧೩೬೮ (೧೮೬೯) ಶ್ರೀ ಕೆ. ಬಿ. ಕೋಳಿವಾಡ (ರಾಣೆಬೆನ್ನೂರು):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಣೆ ಬೆನ್ನೂರು ತಾಲ್ಲೂಕಿನಲ್ಲಿ ತುಂಗಭದ್ರಾ ನದಿಗೆ ಮೇಡ್ಲೇರಿ ಹತ್ತಿರ ಕವಲೆತ್ತು ನಟವಳ್ಳಿ ಈ ಗ್ರಾಮಗಳ ಹತ್ತಿರ ಏತ ನೀರಾವರಿ ಯೋಜನೆಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಪ್ರತಿಯೊಂದು ಏತ ನೀರಾವರಿಗೆ ತಗಲುವ ವೆಚ್ಚವೆಷ್ಟು ಮತ್ತು ಆ ಯೋಜನೆಗಳಿಂದ ಎಷ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗುವುದು?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು):-

ಆ) ಈ ಯೋಜನೆಗಳನ್ನು ಕೃಷ್ಣಾ ಜಲಾನಯನ ಏತ ನೀರಾವರಿ ನಿಗಮದಿಂದ ಕೈಗೊಳ್ಳಬೇಕಿದ್ದು, ಮೇಷ್ಟೇರಿ ಗ್ರಾಮದ ಹತ್ತಿರ ಏತ ನೀರಾವರಿ ಯೋಜನೆಯ ಪ್ರಾಥಮಿಕ ತನಿಖಾ ವರದಿಯನ್ನು ತಯಾರಿಸಲಾಗಿದ್ದು, ವರದಿಯು ಪರಿಶೀಲನೆಯಲ್ಲಿದೆ. ಕವಲೆತ್ತು ಗ್ರಾಮದ ಹತ್ತಿರ ಏತ ನೀರಾವರಿ ಯೋಜನೆಯ ಪ್ರಾಥಮಿಕ ತನಿಖೆ ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. ನಿಟವಳ್ಳಿ ಗ್ರಾಮದ ಹತ್ತಿರ ಏತ ನೀರಾವರಿ ಯೋಜನೆಯು ಹೊಸ ಪ್ರಸ್ತಾವನೆಯಾಗಿದ್ದು, ಸ್ಥಳ ವೀಕ್ಷಣೆ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಈ ಯೋಜನೆಗಳ ತಾಂತ್ರಿಕ ಮತ್ತು ಆರ್ಥಿಕ ಕಕ್ಷತೆ ಬಗ್ಗೆ ವಿವರವಾದ ಆನ್ವೇಷಣೆ ಕೈಗೊಂಡು ಈ ಯೋಜನೆಗಳು ಸಾಧುವೆಂದು ಕಂಡು ಬಂದಲ್ಲಿ ವಿವರವಾದ ಅಂದಾಜನ್ನು ತಯಾರಿಸಿ, ಆರ್ಥಿಕ ಸಂಸ್ಥೆಗಳಿಂದ ಸಾಲ ಸೌಲಭ್ಯ ಪಡೆದ ನಂತರ, ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಬೇಕಾಗುತ್ತದೆ.

ಇ) ವಿವರವಾದ ಆನ್ವೇಷಣೆ ನಡೆಸಿದ ನಂತರವೇ ಈ ವಿವರಗಳು ಗೊತ್ತಾಗುವುದು.

ಬೆಳಗಾವಿ ಜಿಲ್ಲೆಯ ಬೈಲ ಹೊಂಗಲ ತಾಲ್ಲೂಕು ಶ್ರೀ ಕಮಲನಾರಾಯಣ ದೇವಸ್ಥಾನದಲ್ಲಿ ಪ್ರವಾಸಿಗರಿಗಾಗಿ ಸೌಲಭ್ಯ

೧೪೦೦ (೨೨೪೪):- ಶ್ರೀ ಜೆ. ಸಿ. ಮಾಧುಸ್ವಾಮಿ (ಚಿಕ್ಕನಾಯಕನ ಹಳ್ಳಿ):- ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕು ಬೇಗಾಂವ ಗ್ರಾಮದ ೧೧ನೇ ಶತಮಾನದ ಶ್ರೀ ಕಮಲನಾರಾಯಣ ದೇವಸ್ಥಾನದ ಶಿಲ್ಪಕಲೆಯನ್ನು ನೋಡಲು ರಾಜ್ಯದ ನಾನಾ ಭಾಗಗಳಿಂದ ಪ್ರವಾಸಿಗರು ಬರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಸ್ಥಳವಲ್ಲಿ ಪ್ರವಾಸಿಗರಿಗಾಗಿ ಸೌಲಭ್ಯಗಳನ್ನು ಒದಗಿಸಬೇಕೆಂಬ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ಐತಿಹಾಸಿಕ ಶಿಲ್ಪಕಲೆಯನ್ನು ನೋಡಲು ಬರುತ್ತಿರುವ ಪ್ರವಾಸಿಗರಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಿದ್ದಾರೆ?

ಈ) ಒಂದು ವೇಳೆ ಸೌಲಭ್ಯಗಳನ್ನು ಒದಗಿಸದೇ ಇದ್ದಲ್ಲಿ ಸರ್ಕಾರವು ಇನ್ನು ಮುಂದೆಯಾದರೂ ಪ್ರವಾಸಿಗರಿಗೆ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವರೇ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು):-

ಅ) ಬಂದಿರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಈ ಸ್ಥಳವನ್ನು ಪ್ರವಾಸಿ ಕೇಂದ್ರವನ್ನಾಗಿ ಗುರುತಿಸುವ ಸಾಧ್ಯತೆ ಬಗ್ಗೆ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ ನಡೆಸಿ ಪ್ರವಾಸಿ ಸೌಲಭ್ಯ ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು.